# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1033 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 25.08.2026 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಜಿಲ್ಲೆಯಲ್ಲಿ 1962 ಸಂಚಾರಿ ಪಶು ಚಿಕಿತ್ಸಾ ಘಟಕಗಳಿಗೆ ರೈತರಿಂದ ಹೆಚ್ಚಿನ ಬೇಡಿಕೆ ಇರುವುದು ಹಾಗೂ ಕಳೆದ ಮಾರ್ಚ್ ಏಪ್ರಿಲ್‌ನಲ್ಲಿ 3000 ಕ್ಕೂ ಹೆಚ್ಚು ಜಾನುವಾರುಗಳಿಗೆ ಚಿಕಿತ್ಸೆ ನೀಡಿರುವುದು ನಿಜವೇ; | ಮೈಸೂರು ಜಿಲ್ಲೆಯಲ್ಲಿ ಮಾರ್ಚ್-2026 ರಲ್ಲಿ 1434 ಜಾನುವಾರುಗಳಿಗೆ ಮತ್ತು ಏಪ್ರಿಲ್-2026 ರ ಮಾಹೆಯಲ್ಲಿ 1388 ಒಟ್ಟಾರೆಯಾಗಿ ಎರಡು ಮಾಹೆಗಳಲ್ಲಿ 2822 ಜಾನುವಾರುಗಳಿಗೆ ತುರ್ತು ಚಿಕಿತ್ಸೆ ನೀಡಲಾಗಿರುತ್ತದೆ. |
| ಆ) | ಪ್ರಸ್ತುತ ಬೆಳಿಗ್ಗೆ 9.00 ರಿಂದ ಸಂಜೆ 5.00 ರವರೆಗಿನ ಸೇವೆಯಿಂದ ರಾತ್ರಿ ವೇಳೆಯ ತುರ್ತು ಚಿಕಿತ್ಸೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸೇವೆಯ ಸಮಯವನ್ನು ವಿಸ್ತರಿಸಲು ಹಾಗೂ ಹೆಚ್ಚುವರಿ ವಾಹನ ನೀಡಲು ಕ್ರಮ ಕೈಗೊಳ್ಳಲಾಗುವುದೇ; | ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ, ಸಂಚಾರಿ ಪಶು ಚಿಕಿತ್ಸಾ ಘಟಕಗಳ (ಪಶು ಅಂಬ್ಯುಲೆನ್ಸ್) ಸೇವೆಯನ್ನು ಬೆಳಿಗ್ಗೆ 9.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಮಾತ್ರ ಕಾರ್ಯನಿರ್ವಹಿಸಲು ಅವಕಾಶವಿರುತ್ತದೆ.<br><br>ಸಂಚಾರಿ ಪಶು ಚಿಕಿತ್ಸಾ ಘಟಕ ವಾಹನಗಳಿಗೆ ಹೆಚ್ಚು ಬೇಡಿಕೆ ಇರುವುದನ್ನು ಪರಿಗಣಿಸಿ, ಹಾಲಿ ಇರುವ 275 ಸಂಚಾರಿ ಪಶು ಚಿಕಿತ್ಸಾ ಘಟಕಗಳನ್ನು ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರೆಗೆ ಹಾಗೂ ಮಧ್ಯಾಹ್ನ 2.00 ಗಂಟೆಯಿಂದ ರಾತ್ರಿ 10.00 ಗಂಟೆಯವರೆಗೆ ಎರಡು ಪಾಳಿಗಳಲ್ಲಿ ಕಾರ್ಯನಿರ್ವಹಿಸಲು ಮತ್ತು ದೂರದ ಹಾಗೂ ಸಾರಿಗೆ ಸೌಲಭ್ಯಗಳಿಂದ ವಂಚಿತ ಪ್ರದೇಶಗಳ ರೈತರ ಜಾನುವಾರುಗಳ ತುರ್ತು ಚಿಕಿತ್ಸಾ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಒದಗಿಸುವ ಉದ್ದೇಶದಿಂದ, ಪ್ರತಿ 50,000 ಜಾನುವಾರುಗಳಿಗೆ ಒಂದು ಸಂಚಾರಿ ಪಶು ಚಿಕಿತ್ಸಾ ಘಟಕದಂತೆ ಹೆಚ್ಚುವರಿ 125 ವಾಹನಗಳನ್ನು ಒದಗಿಸಲು ಅನುವಾಗುವಂತೆ ಅನುಮೋದನೆ ನೀಡಲು ಕೇಂದ್ರ ಸರ್ಕಾರಕ್ಕೆ ದಿನಾಂಕ: 13-02-2025 ರಂದು ಪ್ರಸ್ತಾವನೆ ಸಲ್ಲಿಸಲಾಗಿತ್ತು. |

| | | |
|---|---|---|
| | | ಆದರೆ, ಕೇಂದ್ರ ಸರ್ಕಾರವು ಹಾಲಿ ಇರುವ ಮಾರ್ಗಸೂಚಿಯನುಸಾರ ಎರಡು ಪಾಳಿಯಗಳಲ್ಲಿ ಪಶು ಆಂಬ್ಯುಲೆನ್ಸ್‌ಗಳ ಸೇವೆ ಒದಗಿಸಲು ಅವಕಾಶವಿರುವುದಿಲ್ಲ ಎಂದು ತಿಳಿಸಿರುತ್ತದೆ.<br><br>ಆದ್ದರಿಂದ ತುರ್ತು ಚಿಕಿತ್ಸಾ ವಾಹನಗಳ ಸೇವೆಯ ಸಮಯದ ವಿಸ್ತರಣೆ ಹಾಗೂ ಹೆಚ್ಚುವರಿ ವಾಹನ ನೀಡುವ ಪ್ರಸ್ತಾಪವಿರುವುದಿಲ್ಲ.<br><br>ಆದಾಗ್ಯೂ, ಹತ್ತಿರದ ಪಶುವೈದ್ಯ ಸಂಸ್ಥೆಯ ಪಶುವೈದ್ಯಾಧಿಕಾರಿಗಳು ಹಾಗೂ ತಾಂತ್ರಿಕ ಸಿಬ್ಬಂದಿಗಳ ಮೂಲಕ ತುರ್ತು ಸೇವೆಯನ್ನು ನೀಡಲಾಗುತ್ತಿದೆ. |
| ಇ) | ಸರಗೂರು ಘಟಕದಲ್ಲಿ ಪಶುವೈದ್ಯರಿಲ್ಲದಿರಲು ಕಾರಣವೇನು ಹಾಗೂ ಗುತ್ತಿಗೆ ಸಿಬ್ಬಂದಿಯಿಂದ ಯೋಜನೆಗೆ ತೊಂದರೆಯಾಗದಂತೆ ಕೈಗೊಂಡಿರುವ ಕ್ರಮಗಳೇನು; | ಸಂಚಾರಿ ಪಶು ಚಿಕಿತ್ಸಾ ಘಟಕ ವಾಹನಗಳ ಕಾರ್ಯಾಚರಣೆಯನ್ನು ಟೆಂಡರ್ ಮೂಲಕ ಗುರುತಿಸಲಾದ ಸೇವಾ ಪೂರೈಕೆದಾರರಾದ **M/s. Eduspark, Malad (West), Mumbai-400064** (Lead Member of Consortium), ರವರ ಮುಖಾಂತರ ಕಾರ್ಯಾಚರಣೆಗೊಳಿಸಲಾಗುತ್ತಿದ್ದು, ಸರಗೂರು ಸಂಚಾರಿ ಪಶುಚಿಕಿತ್ಸಾ ಘಟಕದಲ್ಲಿ ಪಶುವೈದ್ಯರು ಹಾಗೂ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. |
| ಈ) | ಈ ಯೋಜನೆಯಿಂದಾಗಿ ಮೈಸೂರು ಜಿಲ್ಲೆಯಲ್ಲಿ ದಿನಂಪ್ರತಿ ಹಾಲಿನ ಉತ್ಪಾದನೆ 6.90 ಲಕ್ಷ ಲೀಟರ್ ನಿಂದ 9.27 ಲಕ್ಷ ಲೀಟರಿಗೆ ಏರಿಕೆಯಾಗಿದೆಯೇ; ಹಾಗಿದ್ದಲ್ಲಿ, ಇದನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೇ? | ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಮೈಸೂರು ಇವರ ದಾಖಲಾತಿಯಂತೆ ಹಾಲಿನ ಉತ್ಪಾದನೆ 6.9 ಲಕ್ಷ ಲೀಟರ್ ನಿಂದ 9.27 ಲಕ್ಷ ಲೀಟರ್‌ಗೆ ಏರಿಕೆಯಾಗಿದೆ.<br><br>ಸದರಿ ಯೋಜನೆಯನ್ನು ದಿನಾಂಕ:05-08-2023 ರಿಂದ ರಾಜ್ಯಾದ್ಯಂತ ಜಾರಿಗೊಳಿಸಲಾಗಿರುತ್ತದೆ. ಹಾಲಿ 275 ಸಂಚಾರಿ ಪಶು ಚಿಕಿತ್ಸಾ ಘಟಕ ವಾಹನಗಳು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯಾಚರಣೆಯಲ್ಲಿರುತ್ತವೆ. |

**ಸಂಖ್ಯೆ:ಪಸಂಮೀ 232 ಸಲೆವಿ 2026**

24/8

**(ಸಿ. ಪುಟ್ಟರಂಗಶೆಟ್ಟಿ)**

**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**